# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಎಲ್ಲಿ ಯಾರ ಹೆಸರಿನ ಅನ್ನವಿರುತ್ತದೋ
ಸಮಯ ಅವರನ್ನು ಅಲ್ಲಿಗೆ ಕರೆದೊಯ್ಯುತ್ತದೆ..
ಯಾರೂ ಕೂಡ ಇನ್ನೊಬ್ಬರು ಕೊಟ್ಟದ್ದನ್ನು ತಿನ್ನುವುದಿಲ್ಲ
ತನ್ನ ಅದೃಷ್ಟದಲ್ಲಿ ಇದ್ದುದನ್ನೇ ತಿನ್ನುತ್ತಾರೆ..
ಪರರಿಂದ ಯಾರು ಉನ್ನತ ಸ್ಥಾನ ಪಡೆಯುವುದಿಲ್ಲ
ಅದೃಷ್ಟದ ಬಾಗಿಲು ತೆರೆದಾಗ ತಾನಾಗಿಯೇ ಒಲಿಯುತ್ತದೆ..
ಇನ್ನೊಬ್ಬರ ಸಹಕಾರದಿಂದ ಸಿಂಹಾಸನ ಬದಲಾಗುವುದಿಲ್ಲ
ಭಗವಂತನ ಅನುಗ್ರಹ ಆದಾಗ ಅವಕಾಶ ಒದಗುತ್ತದೆ..
ಎಲ್ಲವೂ ಭೂಮಿಗೆ ಬರುವಾಗಲೇ ನಿಗದಿಯಾಗಿರುತ್ತದೆ
ಆದರೆ ಎಲ್ಲರು ಮಾನವರಾಗಿ ಕಾರ್ಯನಿರ್ವಹಿಸಬೇಕಾಗುತ್ತದೆ..
**ಭಗವಾನ್ ಶ್ರೀಕೃಷ್ಣ**


REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 09-05-2025 to 15-05-2025 ಬೆಲೆ: 7-00 ಸಂಪುಟ–4 ಸಂಚಿಕೆ–46 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು








ಪಾಪಿ ಪಾಕಿಸ್ಥಾನದ ಉಗ್ರರು ನಮ್ಮ ನೆಲದ ಸುಮಂಗಲಿಯರ ಹಣೆಯ "ಸಿಂಧೂರ"ದ ಮೇಲೆ ಕಣ್ಣಿಟ್ಟು ತಪ್ಪು ಮಾಡಿದ್ದಾರೆ. ಈ ನಮ್ಮ ನೆಲದಲ್ಲಿ ಹಿಂದೆ ಹೆಣ್ಣಿನ ಮಾನ, ಪ್ರಾಣಕ್ಕಾಗಿ ಎಂತೆಂತಹ ಯುದ್ಧ ನಡೆದಿದೆ ಎನ್ನುವ ಇತಿಹಾಸವನ್ನು ತಿಳಿದುಕೊಂಡು ಬಂದಿದ್ದರೆ ಅವರು ಅಂತಹ ತಪ್ಪು ಮಾಡಲು ಸಾಧ್ಯವಿರಲಿಲ್ಲ. ಅವರು ಮಾಡಿದ ತಪ್ಪಿನ ಪರಿಣಾಮವಾಗಿ ನಮ್ಮ ಯೋದರು ಅವರ ನೆಲಕ್ಕೆ ನುಗ್ಗಿ ಸುಮಂಗಲಿಯರ "ಸಿಂದೂರ"ದ ಹೆಸರಿನಲ್ಲಿ ಹೊಡೆದು, ನಮ್ಮ ನೆಲದಲ್ಲಿ ಸಿಂಧೂರಕ್ಕೆ ಎಷ್ಟು ಶಕ್ತಿ ಮತ್ತು ಮಹತ್ವ ಇದೆ ಎನ್ನುವುದನ್ನು ಆ ಪಾಪಿಗಳಿಗೆ ತೋರಿಸಿಕೊಟ್ಟಂತಾಗಿದೆ.

## ಪಾಕಿಸ್ಥಾನಕ್ಕೆ ಎಚ್ಚರಿಕೆಯ ಗಂಟೆ –ಸಿದ್ದರಾಮಯ್ಯ



**ಬೆಂಗಳೂರು:** ಪಾಕಿಸ್ತಾನದಲ್ಲಿ ಉಗ್ರ ನೆಲೆಗಳ ಮೇಲೆ ನಮ್ಮ ಸೈನಿಕರು ದಾಳಿ ನಡೆಸಿ ಪರಾಕ್ರಮ ಮೆರೆದಿದ್ದಾರೆ. ದೇಶದ ಸೈನಿಕರಿಗೆ ಇಡೀ ರಾಜ್ಯದ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹಣೆಗೆ ಕುಂಕುಮವಿಟ್ಟು ದೇಶದ ಸೇನೆಯನ್ನು ಶ್ಲಾಘಿಸಿದರು. ತಮ್ಮ ಕಾವೇರಿ ನಿವಾಸದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಭದ್ರತೆ ವಿಷಯದಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಇದು ಪಾಕಿಸ್ಥಾನಕ್ಕೆ ಎಚ್ಚರಿಕೆಯ ಗಂಟೆ. ನಮ್ಮ ಸರ್ಕಾರ ನೂರಕ್ಕೆ ನೂರರಷ್ಟು ಸೇನೆ ಕೈಗೊಂಡಿರುವ ಕ್ರಮವನ್ನು **3ನೇ ಪುಟಕ್ಕೆ**

## ಸಿಡಿಲಿನಂತಹ ಉತ್ತರ ಕಟ್ಟಿಟ್ಟ ಬುತ್ತಿ –ಕ್ಯಾ. ಚೌಟ

**ಮಂಗಳೂರು:** "ಆಪರೇಷನ್ ಸಿಂಧೂರ್ ಕೇವಲ ಭಯೋತ್ಪಾದಕ ವಿರುದ್ಧ ಕಾರ್ಯಾಚರಣೆಯಾಗಿರಲಿಲ್ಲ, ಬದಲಾಗಿ ಅದು ನವ ಭಾರತದ ಅಪ್ರತಿಮ ಶಕ್ತಿಯನ್ನು ಜಗತ್ತಿಗೆ ಸಾರಿದ ಐತಿಹಾಸಿಕ ದಿನ" ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಬಣ್ಣಿಸಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆ ಪಾಕಿಸ್ತಾನ ಅತಿಕ್ರಮಿತ ಕಾಶ್ಮೀರ ಮತ್ತು ಪಾಕಿಸ್ತಾನದ 9 ಉಗ್ರರ ನೆಲೆಗಳ ಮೇಲೆ ಮಧ್ಯರಾತ್ರಿ ನಡೆಸಿದ ವೈಮಾನಿಕ ದಾಳಿಯ ಕುರಿತಂತೆ ಪ್ರತಿಕ್ರಿಯಿಸಿರುವ ಸಂಸದರು, 'ಸಿಂಧೂರ ' ಎನ್ನುವುದು ರಾಷ್ಟ್ರದ ವೀರತ್ವ, **3ನೇ ಪುಟಕ್ಕೆ**



## ಪೋಸ್ಟ್‌ಗಳ ಬಲೆಗೆ ಬಿದ್ದು ಭವಿಷ್ಯ ಕಳೆದುಕೊಳ್ಳಬೇಡಿ–ಅಗರ್ವಾಲ್

**ಮಂಗಳೂರು:** ಅನೇಕ ಯುವಕರು ಅಜ್ಞಾತವಾಗಿ ಸೈಬರ್ ಅಪರಾಧಗಳನ್ನು ಎಸಗುತ್ತಿದ್ದು, ಅವರ ಭವಿಷ್ಯ, ಉದ್ಯೋಗಾವಕಾಶಗಳು ಮತ್ತು ಪ್ರವಾಸ ಅವಕಾಶಗಳು ಹಾಳಾಗುತ್ತಿವೆ. ಹಾಗಾಗಿ ವೈರಲ್ ಪೋಸ್ಟ್‌ಗಳ ಬಲೆಗೆ ಬೀಳಬೇಡಿ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗ್ರವಾಲ್ ಯುವಕರಿಗೆ ಎಚ್ಚರಿಕೆ ಕಿವಿಮಾತು ಹೇಳಿದ್ದಾರೆ. ದ್ವೇಷ ಹರಡುವ ವಿಷಯಗಳನ್ನು ಪೋಸ್ಟ್ ಮಾಡುವ ಮೊದಲು ಯೋಚಿಸಿ. ಇತ್ತೀಚಿನ ದಿನಗಳಲ್ಲಿ ಮಂಗಳೂರು ನಗರ ಪೊಲೀಸ್ ಕಮಿಷನರೇಟ್ **3ನೇ ಪುಟಕ್ಕೆ**












## ಸಿಡಿಲಿನಂತಹ ಉತ್ತರ ಕಟ್ಟಿಟ್ಟ ಬುತ್ತಿ –ಕ್ಯಾ. ಚೌಟ

ಒಂದನೇ ಪುಟದಿಂದ......

ಧೈರ್ಯ ಮತ್ತು ಸಂಕಲ್ಪದ ಪ್ರತೀಕವಾಗಿ ಹೊರಹೊಮ್ಮಿದೆ. ನಮ್ಮ ಸೇನೆಯ ವ್ಯವಸ್ಥಿತ ಹಾಗೂ ಕೆಚ್ಚೆದೆಯ ಕಾರ್ಯಾಚರಣೆಯ ಮೂಲಕ ಭಾರತದ ಸಾಮರ್ಥ್ಯವನ್ನು ಜಗತ್ತಿಗೆ ತೋರಿಸಿಕೊಟ್ಟಿದೆ' ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೊಸ ಭಾರತವನ್ನು ಯಾರಾದರೂ ಕೆಣಕಿದರೆ, ನಮ್ಮ ಉತ್ತರವು ಇತಿಹಾಸವನ್ನೇ ನಡುಗಿಸುವಂತಹ ಶಕ್ತಿಯನ್ನು ಹೊಂದಿರುತ್ತದೆ. ಕೇವಲ 25 ನಿಮಿಷಗಳಲ್ಲಿ ನಡೆದ ಪರಿಣಾಮಕಾರಿ ಕಾರ್ಯಾಚರಣೆಯಲ್ಲಿ ನಮ್ಮ ಸೇನೆಯು ಭಯೋತ್ಪಾದಕ ಅಜ್ಮಲ್ ಕಸಬ್‌ನ ತರಬೇತಿಕೇಂದ್ರ ಸೇರಿ 9 ಪ್ರದೇಶಗಳಲ್ಲಿನ 21 ಉಗ್ರರ ಅಡಗುತಾಣಗಲನ್ನು ಕ್ಷಿಪಣಿ ದಾಳಿ ಮಾಡಿ ನಾಶ ಮಾಡಿರುವುದು ಬದಲಾದ ಭಾರತ ನೀಡಿದ ಪ್ರತಿಕ್ರಿಯೆಯಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರದೃಢ ಮತ್ತು ಅಚಲ ನಾಯಕತ್ವದಲ್ಲಿ, ಭಾರತವು ಮತ್ತೊಮ್ಮೆ ಭಯೋತ್ಪಾದನೆ ಅಥವಾ ಅದನ್ನು ಬೆಂಬಲಿಸುವವರನ್ನು ಸಹಿಸುವುದಿಲ್ಲ ಎಂದು ಮತ್ತೊಮ್ಮೆ ವಿಶ್ವಕ್ಕೆ ತೋರಿಸಿಕೊಟ್ಟಿದೆ ಎಂದು ಪ್ರತಿಪಾದಿಸಿದ್ದಾರೆ. ನಾಗರಿಕರಿಗೆ ಹಾನಿಯಾಗದಂತೆ ನಮ್ಮ ಸೇನೆಯ ಜವಾಬ್ದಾರಿಯುತ ಮತ್ತು ಪರಿಣಾಮಕಾರಿಕಾರ್ಯ ನಿರ್ವಹಣೆಯು ನಿಜಕ್ಕೂ ಶ್ಲಾಘನೀಯ. ಭಯೋತ್ಪಾದಕ ಹಾಗೂ ಪಾಕಿಸ್ತಾನದ ಕುತಂತ್ರದ ವಿರುದ್ಧ ಪ್ರತೀಕಾರ ತೀರಿಸಬೇಕೆಂಬ ಭಾರತೀಯರಅಪೇಕ್ಷೆಈಡೇರಿದೆ. ಉಗ್ರರು ಹಾಗೂ ಅವರ ಸಹಚರರು ಎಲ್ಲೇ ಅಡಗಿ ಕುಳಿತರೂ, ಅವರೆಲ್ಲರನ್ನೂ ನುಗ್ಗಿ ಹೊಡೆದು ಸಂಹಾರ ಮಾಡುವ ಅತ್ಯಂತ ಬಲಿಷ್ಠ ರಾಷ್ಟ್ರ ಎಂಬುದನ್ನು ನಮ್ಮ ಹೆಮ್ಮೆಯ ಭಾರತ ತೋರಿಸಿ ಕೊಟ್ಟಿದೆ. ಆ ಮೂಲಕ ಇತ್ತೀಚೆಗೆ ಪ್ರಧಾನಮಂತ್ರಿ ಬಿಹಾರದಲ್ಲಿ ಮಾಡಿದ್ದ ಶಪಥ, ವಾಗ್ದಾನವನ್ನು ನೆರವೇರಿಸಿದ್ದಾರೆ ಎಂದು ಹೇಳಿದ್ದಾರೆ.

## ಪೋಸ್ಟ್‌ಗಳ ಬಲೆಗೆ ಬಿದ್ದು ಭವಿಷ್ಯ ಕಳೆದುಕೊಳ್ಳಬೇಡಿ– ಅಗರ್ವಾಲ್

ಒಂದನೇ ಪುಟದಿಂದ......

ವ್ಯಾಪ್ತಿಯಲ್ಲಿ ಫೇಸ್ ಬುಕ್, ಇನ್ ಸ್ಟಾಗ್ರಾಂ, ವಾಟ್ಸ್‌ಅಪ್ ಗುಂಪುಗಳು ಹಾಗೂ ಇತರ ಸಾಮಾಜಿಕ ಜಾಲತಾಣಗಳಲ್ಲಿ ಕೋಮು ದ್ವೇಷ, ಸುಳ್ಳು, ತಪ್ಪು ಮಾಹಿತಿ ಮತ್ತು ಬೆದರಿಕೆ ಸಂದೇಶ ಹರಡುವ ಪ್ರಕರಣಗಳಲ್ಲಿ ತೀವ್ರ ಏರಿಕೆ ಕಂಡು ಬಂದಿದ್ದು, ಕೆಲವರು ಸಾಮಾಜಿಕ ಜಾಲತಾಣಗಳನ್ನು ಉಪಯೋಗಿಸಿ ಸಮುದಾಯಗಳ ನಡುವೆ ಅಸಮಾಧಾನ ಉಂಟು ಮಾಡಲು ಸುಳ್ಳು ಸುದ್ದಿ ಹರಡಲು ಮತ್ತು ಇತರರನ್ನು ಬೆದರಿಸಲು ಪ್ರಯತ್ನಿಸುತ್ತಿದ್ದಾರೆ. ಇದು ಗಂಭೀರ ಕಾನೂನು ಉಲ್ಲಂಘನೆಯಾಗಿದ್ದು, ಗಂಭೀರವಾಗಿ ಪರಿಣಿಸುತ್ತಿದ್ದೇವೆ. ಕಳೆದ ಒಂದು ವಾರದಲ್ಲಿ 30ಕ್ಕೂ ಅಧಿಕ ಕೋಮು ದ್ವೇಷ ಮತ್ತು ಸುಳ್ಳು ಪೋಸ್ಟ್‌ಗಳ ವಿರುದ್ಧ ಮಂಗಳೂರು ನಗರ ಪೊಲೀಸ್ ಪ್ರಕರಣ ದಾಖಲಿಸಿಕೊಂಡಿದೆ. ಈ ಪ್ರಕರಣಗಳನ್ನು ಸೆನ್ ಕ್ರೈಂ ಪೊಲೀಸ್ ಠಾಣೆಯ ಎಸಿಪಿ ನೇತೃತ್ವದ ವಿಶೇಷ ತಂಡ ತನಿಖೆ ನಡೆಸುತ್ತಿದೆ ಎಂದವರು ತಿಳಿಸಿದ್ದಾರೆ. ಕೆಲವರು ನಕಲಿ ಪ್ರೊಫೈಲ್‌ಗಳು ಅಥವಾ ವಿದೇಶದಲ್ಲಿ ನೋಂದಾಯಿತ ಖಾತೆಗಳನ್ನು ಬಳಸುವುದರಿಂದ ತಮ್ಮನ್ನು ರಕ್ಷಿಸಿಕೊಳ್ಳಬಹುದು. ಅವರನ್ನು ಪತ್ತೆ ಹಚ್ಚಲಾಗದು ಎಂದು ಭಾವಿಸಿಕೊಂಡಿದ್ದರೆ. ಅದು ಸಂಪೂರ್ಣ ತಪ್ಪು. ಪೊಲೀಸ್ ಇಲಾಖೆ ಸಾಮಾಜಿಕ ಜಾಲತಾಣ ಕಂಪೆನಿಗಳು, ರಾಷ್ಟ್ರೀಯ ಸಂಸ್ಥೆಗಳು ಮತ್ತುಅಂತಾರಾಷ್ಟ್ರೀಯ ಸಹಕಾರ ಚಾಲನ್‌ಗಳೊಂದಿಗೆ ಅಪರಾಧಿಗಳನ್ನು ಪತ್ತೆ ಹಚ್ಚಲು ಮತ್ತು ಗುರುತಿಸಲು ಕೆಲಸ ಮಾಡುತ್ತಿವೆ. ಖಾತೆ ಎಲ್ಲಿಂದ ತೆರೆಯಲ್ಪಟ್ಟಿದ್ದರೂ ಪತ್ತೆ ಹಚ್ಚುವ ಕಾರ್ಯ ನಡೆಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

## ಇದು ಪಾಕಿಸ್ಥಾನಕ್ಕೆ ಎಚ್ಚರಿಕೆಯ ಗಂಟೆ–ಸಿದ್ದರಾಮಯ್ಯ

ಒಂದನೇ ಪುಟದಿಂದ......

ಬೆಂಬಲಿಸುತ್ತದೆ. ಆಪರೇಷನ್ ಸಿಂಧೂರ ಹೆಸರಿನಲ್ಲಿ ಸುಮಾರು 9 ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಲಾಗಿದೆ. ಕೇವಲ ಉಗ್ರಗಾಮಿಗಳ ನೆಲೆಗಳ ಮೇಲೆ ಮಾತ್ರ ದಾಳಿ ನಡೆಸಲಾಗಿದೆ ಎಂದರು. ನಮ್ಮ ಸೈನಿಕರು ಉಗ್ರರ ನೆಲೆಗಳನ್ನು ಪತ್ತೆ ಹಚ್ಚಿ ದಾಳಿ ಮಾಡಿದ್ದು, ಅಮಾಯಕ ಜನರ ಸಾವು–ನೋವು ತಪ್ಪಿಸಿದ್ದಾರೆ. ಸೈನಿಕರ ಕಾರ್ಯ ದಕ್ಷತೆಗೆ ದೊಡ್ಡ ಸಲಾಂ. ಈ ದಾಳಿಯನ್ನು ನಾವು ಸ್ವಾಗತಿಸುತ್ತೇವೆ. ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕ 26 ಜನರ ಹತ್ಯೆ ನಡೆಸಿದ ಉಗ್ರರನ್ನು ಬೆಂಬಲಿಸುವವರು, ಸಾಕುವವರು ಸಹ ಪಾಕಿಸ್ಥಾನದವರೇ ಎಂಬುದು ಸ್ಪಷ್ಟವಾಗಿದೆ. ಉಗ್ರರ ದಾಳಿಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಯಾವತ್ತೂ ಪಾಕಿಸ್ಥಾನ ಖಂಡಿಸುವ ಕೆಲಸ ಮಾಡಿಲ್ಲ. ನಾನೂ ಕೂಡ ಸರ್ಕಾರದ ಪರವಾಗಿ ಬೆಂಬಲ ಘೋಷಿಸುತ್ತೇನೆ. ನಾವೆಲ್ಲರೂ ಕೂಡ ಎಚ್ಚರ ವಹಿಸುವ ಕೆಲಸ ಮಾಡುತ್ತೇವೆ ಎಂದು ಹೇಳಿದರು.

## ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು–ನಗರದ ಬೊಂದೇಲ್ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ನಲ್ಲಿ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಇಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಶನ್ ಇಂಜಿನಿಯರಿಂಗ್, ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್, ಕಮರ್ಷಿಯಲ್ ಪ್ರಾಕ್ಟೀಸ್ (ಇಂಗ್ಲೀಷ್ ಮತ್ತು ಕನ್ನಡ) ಹಾಗೂ ಲೈಬ್ರೆರಿ ಅಂಡ್ ಇನ್‌ಫಾರಮೇಶನ್ ಸೈನ್ಸ್ ಕೋರ್ಸ್‌ಗಳಿಗೆ ಸೇರಲು ಎಸ್.ಎಸ್.ಎಲ್.ಸಿ/ ತತ್ಸಮಾನ ಪರೀಕ್ಷೆಯಲ್ಲಿ ಪಾಸಾಗಿರುವ ಡಿಪ್ಲೋಮಾ ಕೋರ್ಸ್ ಸೇರಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಪಡೆಯಲು ಹಾಗೂ ಭರ್ತಿ ಮಾಡಿದ ಅರ್ಜಿ ಸಲ್ಲಿಸಲು ಮೇ 15 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ಅಥವಾ ಅರ್ಜಿ ಸಲ್ಲಿಸಲು ಆಸಕ್ತಿಯುಳ್ಳ ವಿದ್ಯಾರ್ಥಿಗಳು ಬೊಂದೇಲ್ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ (ದೂರವಾಣಿ ಸಂಖ್ಯೆ 0824-2482334/ 9611320910/9844744845) ಸಂಪರ್ಕಿಸಿ.

## ಕೆ.ಎಸ್.ಆರ್.ಟಿ.ಸಿ : ತರಬೇತಿಗೆ ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಪುತ್ತೂರು ವಿಭಾಗದ ವತಿಯಿಂದ ಶಿಶಿಕ್ಷು ಅಧಿನಿಯಮ 1961 ರನ್ವಯ ಪೂರ್ಣ ಅವಧಿಯ ತಾಂತ್ರಿಕ/ಪಾಸಾ ವೃತ್ತಿಯಲ್ಲಿ ತರಬೇತಿ ಪಡೆಯಲು ಇಚ್ಚಿಸುವ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 15ರವರೆಗೆ ಅವಧಿ ವಿಸ್ತರಿಸಲಾಗಿದೆ. ಮೇ 20 ರಂದು ಬೆಳಿಗ್ಗೆ 10 ಗಂಟೆಗೆ ಮೂಲ ದಾಖಲಾತಿಯೊಂದಿಗೆ ಶಿಶಿಕ್ಷು ಆಯ್ಕೆ ಸಮಿತಿಯ ಮುಂದೆ ನೇರ ಸಂದರ್ಶನಕ್ಕೆ ಹಾಜರಾಗಲು ಕೆ.ಎಸ್.ಆರ್.ಟಿ.ಸಿ ಪುತ್ತೂರು ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊರಾರ್ಜಿ ವಸತಿ ಕಾಲೇಜಿನ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು – ದಕ್ಷಿಣ ಕನ್ನಡ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖಾ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೂಲ್ಕಿ ತಾಲೂಕಿನ ಮೆನ್ನಬೆಟ್ಟು ಕಮ್ಮಾಜೆ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜಿನ 2025–26ನೇ ಸಾಲಿನ ಪ್ರಥಮ ಪಿಯುಸಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಹತ್ತಿರದ ಯಾವುದೇ ಮೊರಾರ್ಜಿ ದೇಸಾಯಿ ವಸತಿ ಶಾಲಾ ಪ್ರಾಂಶುಪಾಲರನ್ನು ಸಂಪರ್ಕಿಸಬಹುದು (ದೂರವಾಣಿ ಸಂಖ್ಯೆ: 0824–2200766) ಎಂದು ಕಮ್ಮಾಜೆ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪಿಯು ಕಾಲೇಜು ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಂಪು ಮೂತಿ ಹುಳುವಿನ ಭಾದೆ ನಿರ್ವಹಣೆಗೆ ಮಾಹಿತಿ

ಶಿವಮೊಗ್ಗ : ಇತ್ತೀಚಿನ ದಿನಗಳಲ್ಲಿ ಅಡಿಕೆಗೆ ಕೆಂಪು ಮೂತಿ ಹುಳು ಸೊರಬ ಮತ್ತು ಸಾಗರ ಭಾಗದ ಅಡಿಕೆ ತೋಟಗಳಲ್ಲಿ ಹೆಚ್ಚಾಗಿ ಕಾಣಿಸುತ್ತಿದ್ದು, ರೈತರಿಗೆ ಸಮಸ್ಯೆಯಾಗಿದೆ. ತೀವ್ರ ಹಾನಿಗೊಳಗಾದ ಮರಗಳಲ್ಲಿ ಕಾಂಡದ ಭಾಗದಲ್ಲಿ ನಾರಿನ ಅಂಶ ಹೊರಬರುತ್ತದೆ. ಹಾನಿಗೊಳಗಾದ ಮರಗಳನ್ನು ಸೀಳಿ ನೋಡಿದಾಗ ವಿವಿಧ ಹಂತದ ಹುಳುಗಳನ್ನು ಕಾಣಬಹುದು. ಇದರಿಂದ ಬೆಳವಣಿಗೆ ಕುಂಠಿತವಾಗುತ್ತದೆ. ಹಾನಿಗೊಳಗಾದ ಮರಗಳು ಗಾಳಿ, ಮಳೆಗೆ ಬೀಳುತ್ತವೆ. ಇವುಗಳ ನಿರ್ವಹಣಾ ಕ್ರಮಗಳ ಮಾಹಿತಿಯನ್ನು ಡಾ.ನಾಗರಾಜಪ್ಪ ಅಡಿವಪ್ಪರ್, ಮುಖ್ಯಸ್ಥರು, ಅಡಿಕೆ ಸಂಶೋಧನಾ ಕೇಂದ್ರ, ನವಿಲೆ, ಶಿವಮೊಗ್ಗ ತಿಳಿಸಿರುತ್ತಾರೆ.

## ಬಾಲಕಾರ್ಮಿಕ ಪತ್ತೆ : ಪುನರ್ವಸತಿಗೆ ದಾಖಲು

ಶಿವಮೊಗ್ಗ : ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಕಾಯ್ದೆಯನ್ವಯ ಶಿಕಾರಿಪುರ ತಾಲ್ಲೂಕಿನಲ್ಲಿ ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಪೊಲೀಸ್ ಇಲಾಖೆ ಮತ್ತು ಮಕ್ಕಳ ಸಹಾಯವಾಣಿ ಇವರ ಸಂಯುಕ್ತಾಶ್ರಯದಲ್ಲಿ ಶಿರಾಳಕೊಪ್ಪದಲ್ಲಿ ಅನಿರೀಕ್ಷಿತ ತಪಾಸಣೆ ನಡೆಸಿದಾಗ ಉಪ್ಪಿನಕಾಯಿ ತಯಾರಿಕಾ ಘಟಕದಲ್ಲಿ 02 ಬಾಲಕಾರ್ಮಿಕರು ಹಾಗೂ 01 ಕಿಶೋರ ಕಾರ್ಮಿಕ ಪತ್ತೆಯಾಗಿರುತ್ತಾರೆ. ಈ ಬಾಲಕರನ್ನು ರಕ್ಷಿಸಿ ಪುನರ್ವಸತಿಗಾಗಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಲಾಗಿದೆ.

## ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ – ಪ್ರಸಕ್ತ (2025–26) ಸಾಲಿಗೆ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಕಾಲೇಜು, ಕ್ಯಾತೆ ಗ್ರಾಮ, ಕೊಡ್ಲಿಪೇಟೆ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇಲ್ಲಿಗೆ ವಿಜ್ಞಾನ ವಿಭಾಗದ ಭೌತಶಾಸ್ತ್ರ ಉಪನ್ಯಾಸಕರು(01 ಹುದ್ದೆ) ಮತ್ತು ಗಣಿತ ಉಪನ್ಯಾಸಕರು(01 ಹುದ್ದೆ) ಮತ್ತು ವಿಜ್ಞಾನ ಶಿಕ್ಷಕರು(01 ಹುದ್ದೆ) ಅತಿಥಿ ಶಿಕ್ಷಕರ/ ಉಪನ್ಯಾಸಕರ ಸೇವೆಯನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

## ತನಿಖೆಯ ಮುನ್ನವೇ ಫಾಝಿಲ್ ಕುಟುಂಬಕ್ಕೆ ಕ್ಲೀನ್ ಚಿಟ್



ಮಂಗಳೂರು: ಪೊಲೀಸ್ ತನಿಖೆಗೆ ಮುನ್ನವೇ ಸ್ಪೀಕರ್ ಯು.ಟಿ ಖಾದರ್ ಕೊಲೆಯ ಪ್ರಧಾನ ಸೂತ್ರದಾರ ಸಹೋದರನೊಂದಿಗೆ ಮಾತನಾಡಿ, ಕುಟುಂಬಕ್ಕೆ ಕ್ಲೀನ್ ಚಿಟ್ ನೀಡಿ ತನಿಖೆಯ ಹಾದಿ ತಪ್ಪಿಸುವ ಕೆಲಸ ಮಾಡಿದ್ದು, ತಕ್ಷಣ ರಾಜೀನಾಮೆ ನೀಡಬೇಕು. ಈ ಮೂಲಕ ಸ್ಪೀಕರ್ ಕುರ್ಚಿಯ ಗೌರವ ಉಳಿಸುವ ಕೆಲಸ ಮಾಡಬೇಕು ಎಂದು ಶಾಸಕ ಡಾ.ಭರತ್ ಶೆಟ್ಟಿ ವೈ ಆಗ್ರಹಿಸಿದ್ದಾರೆ. ಇತ್ತ ತನಿಖೆಯ ವರದಿಯಲ್ಲಿ ಫಾಜಲ್ ಸಹೋದರರನ ಭಾಗಿಯಾಗಿದ್ದಾನೆ ಎಂದು ಗೃಹ ಮಂತ್ರಿಗಳು ಮತ್ತು ಪೊಲೀಸ್ ಆಯುಕ್ತರು ಸುದ್ದಿಗೋಷ್ಟಿಯಲ್ಲಿ ಹೇಳಿದ್ದಾರೆ. ಫಾಝಿಲ್ ಮನೆಯವರು ಅಥವಾ ಕುಟುಂಬಸ್ಥರು ಯಾರೂ ಕೂಡ ಈ ಘಟನೆಯಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿಲ್ಲ ಅಂತ ಮಾಧ್ಯಮಕ್ಕೆ ಸ್ಪೀಕರ್ ಯು.ಟಿ ಖಾದರ್ ಹೇಳಿಕೆ ನೀಡಿದ್ದು ಹೇಗೆ?. ಫಾಝಿಲ್ ಅವರ ಸಹೋದರ ಜತೆ ಮಾತಾಡಿದ್ದೇನೆ ಅಂತ ಸ್ವತಃ ಖಾದರ್ ಮಾಧ್ಯಮಕ್ಕೆ ಹೇಳಿಕೆ ನೀಡಿದ್ದಾರೆ. ಪೊಲೀಸರ ವಶದಲ್ಲಿರುವಾಗ ಮಾತನಾಡಿದ್ದು ಹೇಗೆ, ಪೊಲೀಸರು ಆರೋಪಿಗಳ ಜತೆ ಮಾತನಾಡಲು ಅವಕಾಶ ಕಲ್ಪಿಸಿದ್ದು ಹೇಗೆ? ಆರೋಪಿಗಳನ್ನು ರಕ್ಷಿಸಲು ಸ್ಪೀಕರ್ ಅವರು ಮಧ್ಯ ಪ್ರವೇಶಿಸಿ ತನಿಖೆಯ ದಿಕ್ಕು ತಪ್ಪಿಸುವ ಕುತಂತ್ರ ಮಾಡುತ್ತಿದ್ದಾರೆಯೆ? ಈ ಕೇಸಿನಲ್ಲಿ ಸ್ಪೀಕರ್ ಅವರ ಪಾತ್ರ ಕುರಿತು ಸಂಶಯ ವ್ಯಕ್ತವಾಗುತ್ತಿದೆ.ಈ ಬಗ್ಗೆ ನಿಷ್ಪಕ್ಷ ಪಾತ ತನಿಖೆಗೆ ಸ್ಪೀಕರ್ ಅವರು ರಾಜೀನಾಮೆ ನೀಡುವುದು ಅಗತ್ಯ ಎಂದು ಹೇಳಿದ್ದಾರೆ.

## ಹಜ್ ಯಾತ್ರಿಕರಿಗೆ ಸಮರ್ಪಕ ಸವಲತ್ತಿಗೆ ಆಗ್ರಹ



ಮಂಗಳೂರು : ಕಳೆದ ವರ್ಷ ಕರ್ನಾಟಕದಿಂದ ಪವಿತ್ರ ಹಜ್ ಯಾತ್ರೆಗೆ ಹಜ್ (ಕಮಿಟಿ) ನಿರ್ವಹಣಾ ಸಮಿತಿ ಮೂಲಕ ತೆರಳಿದ ಅನೇಕ ಮಂದಿ ವಿವಿಧ ರೀತಿಯ ಸಂಕಷ್ಟವನ್ನು ಎದುರಿಸಿದ್ದಾರೆ. ಈ ಬಾರಿ ಹಜ್ ಯಾತ್ರಿಕರಿಗೆ ಸಮರ್ಪಕ ಸವಲತ್ತು ನೀಡುವಂತೆ ದ.ಕ. ಜಿಲ್ಲಾ ಮುಸ್ಲಿಂ ಲೀಗ್ ಆಗ್ರಹಿಸಿದೆ. ಕಳೆದ ವರ್ಷ ಹಜ್ ಯಾತ್ರಿಕರು ಕುಡಿಯುವ ನೀರಿನ ಸಮಸ್ಯೆ, ಸಂಚಾರಕ್ಕೆ ವಾಹನ ವ್ಯವಸ್ಥೆ ಇಲ್ಲದಿರುವಿಕೆ, ಶೌಚಾಲಯದ ಕೊರತೆ ಮತ್ತಿತರ ಸಮಸ್ಯೆಗಳನ್ನು ಎದುರಿಸಿದ್ದರು. ಅದಕ್ಕಿಂತಲೂ ಮಿಗಿಲಾಗಿ ತಮ್ಮ ವಾಸ್ತವ್ಯ ಸ್ಥಳಕ್ಕೆ ಕಾಲ್ನಡಿಗೆಯಿಂದ ಸಾಗಬೇಕಾಗಿತ್ತು. ತಾಪಮಾನ ಏರಿಕೆಯಿಂದಾಗಿ ಹಲವಾರು ಯಾತ್ರಿಗಳು ಸಮಸ್ಯೆ ಎದುರಿಸಿದ್ದರು. ಕೆಲವರು ಪ್ರಾಣ ಕಳೆದುಕೊಂಡಿದ್ದರು. ಈ ವರ್ಷ ಹಜ್ ಯಾತ್ರೆಗೆ ತೆರಳುವ ಎಲ್ಲಾ ಯಾತ್ರಿಕರಿಗೆ ಪೂರ್ಣ ಪ್ರಮಾಣದ ಸವಲತ್ತುಗಳನ್ನು ಒದಗಿಸುವುದರೊಂದಿಗೆ ಕಳೆದ ವರ್ಷದ ದುರಂತ ಮರುಕಳಿಸದಂತೆ ನಿಗಾ ವಹಿಸಬೇಕೆಂದು ದ.ಕ. ಜಿಲ್ಲಾ ಮುಸ್ಲಿಂಲೀಗ್ ಉಪಾಧ್ಯಕ್ಷ ಮುಹಮ್ಮದ್ ಇಸ್ಮಾಯಿಲ್ ರಾಜ್ಯ ಹಜ್ ನಿರ್ವಹಣಾ ಸಮಿತಿ ಹಾಗೂ ರಾಜ್ಯ ವಕ್ಫ್ ಸಚಿವ ಹಾಗೂ ವಿಧನಸಭೆಯ ಸ್ಪೀಕರ್ ಯು.ಟಿ. ಖಾದರ್ ಅವರಲ್ಲಿ ಆಗ್ರಹಿಸಿರುವುದಾಗಿ ಪ್ರಕಟನೆ ತಿಳಿಸಿದೆ.

## ಬಿಜೆಪಿ ಜಿಲ್ಲಾಧ್ಯಕ್ಷರು ತಮ್ಮ ಹಿನ್ನೆಲೆ ಅರಿತಿರಲಿ : ಸದಾಶಿವ ಉಳ್ಳಾಲ್



ಮಂಗಳೂರು : ಸ್ಪೀಕರ್ ಖಾದರ್ ಅವರು ಯಾವತ್ತೂ ಕ್ರಿಮಿನಲ್‌ಗಳು ಅಥವಾ ಅಪರಾಧಿಗಳ ಪರ ವಹಿಸುವುದಿಲ್ಲ. ಅವರ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಬಿಜೆಪಿ ದ.ಕ. ಜಿಲ್ಲಾಧ್ಯಕ್ಷರು ತಮ್ಮ ಹಿನ್ನೆಲೆಯಲ್ಲಿ ಅರಿತಿರಲಿ ಎಂದು ಮೂಡ ಅಧ್ಯಕ್ಷ ಸದಾಶಿವ ಉಳ್ಳಾಲ್ ಹೇಳಿದ್ದಾರೆ. ದ.ಕ. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಹಾಸ್ ಶೆಟ್ಟಿ ಹತ್ಯೆ ಮಾಡಿದವರಿಗೆ ಶಿಕ್ಷೆಯಾಗಲೇಬೇಕು ಎಂದ ಅವರು, ಸತೀಶ್ ಕುಂಪಲ ಖಾದರ್ ಕುರಿತು ಮಾತನಾಡುವಷ್ಟು ದೊಡ್ಡ ವ್ಯಕ್ತಿಯಲ್ಲ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಖಾದರ್ ಅವರನ್ನು ಸೋಲಿಸಲು ಏನೆಲ್ಲ ಒಳ ಒಪ್ಪಂದ ಮಾಡಿದ್ದರು. ಸಹಕಾರ ಸಂಘ ಸ್ಥಾಪಿಸಿ ಏನು ಮಾಡಿದರೂ, ಭೂ ವ್ಯವಹಾರದಲ್ಲಿನ ಹಗರಣ ಹೀಗೆ ಎಲ್ಲರಿಗೂ ಸತೀಶ್ ಕುಂಪಲ ಅವರು ಮಾಡಿರುವ ಅವ್ಯವಹಾರಗಳ ಬಗ್ಗೆ ತಿಳಿದಿದೆ ಎಂದು ಆರೋಪಿಸಿದರು. ಸ್ಪೀಕರ್ ಖಾದರ್‌ರವರು ಯಾವುದೇ ಜಾತಿ, ಮತ ನೋಡದೆ ಜಾತ್ಯತೀತ ನಿಲುವಿನಲ್ಲಿ ಜನರಿಗೆ ಸಹಾಯ ಮಾಡುವ ನಾಯಕ. ಅಪರಾಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವವರಿಗೆ ಸಹಾಯ ಮಾಡುವವರೂ ಅವರಲ್ಲ. ಅವರ ಕುರಿತು ಅಪಪ್ರಚಾರ ಮಾಡುವುದು ಸರಿಯಲ್ಲ ಎಂದರು.

## ಜಮೀನು ಪೋಡಿಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಶಿಸ್ತು ಕ್ರಮ: ಡಿಸಿ



ಮಂಗಳೂರು: ದರಖಾಸ್ತು ಪೋಡಿ ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ವಿಶೇಷ ಆಂದೋಲನ ಕಾರ್ಯಕ್ರಮದಲ್ಲಿ ನಿರ್ಲಕ್ಷ್ಯ ವಹಿಸುವ ಸಿಬ್ಬಂದಿ ಹಾಗೂ ಸರ್ವೇಯರ್‌ಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಎಂ.ಪಿ ಎಚ್ಚರಿಸಿದರು. ದ.ಕ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಎಲ್ಲಾ ತಾಲೂಕುಗಳ ತಹಶೀಲ್ದಾರ್, ಸರ್ವೇ ಅಧಿಕಾರಿ ಗಳೊಂದಿಗೆ ಸಭೆ ನಡೆಸಿ ವಿಶೇಷ ಆಂದೋಲನದ ಪ್ರಗತಿ ಪರಿಶೀಲಿಸಿ ಅವರು ಮಾತನಾಡಿದರು. ಒಂದು ಸರ್ವೇ ನಂಬರ್‌ನ ಎಲ್ಲಾ ಮಂಜೂರುದಾರರಿಗೆ ಏಕಕಾಲದಲ್ಲಿ ಜಮೀನಿನ ಅಳತೆ ಮಾಡಿ ಪೋಡಿ ಮಾಡುವ ಉದ್ದೇಶದಿಂದ ಕಂದಾಯ ಇಲಾಖೆಯಿಂದ ನಮೂನೆ 1–5ವರೆಗಿನ ಮಾಹಿತಿಯನ್ನು ಸಿದ್ಧಪಡಿಸಬೇಕಿದೆ. ಈ ನಿಟ್ಟಿನಲ್ಲಿ ಪ್ರತ್ಯೇಕ ಸಾಫ್ಟ್‌ವೇರ್ ಸಿದ್ಧಪಡಿಸಲಾಗಿದೆ. ಎಲ್ಲಾ ದರಖಾಸ್ತು ಪೋಡಿ ಪ್ರಕರಣಗಳು ಆನ್‌ಲೈನ್ ಮೂಲಕವೇ ನಿರ್ವಹಿಸಬೇಕಿದೆ ಎಂದು ಹೇಳಿದರು.

## ಸುಹಾಸ್ ಶೆಟ್ಟಿ ಕೊಲೆಯಲ್ಲಿ ಪೊಲೀಸರು ನೇರ ಭಾಗಿ–ಕೋಟ್ಯಾನ್



ಮಂಗಳೂರು: ಇತ್ತೀಚೆಗೆ ನಡೆದ ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ಬಗ್ಗೆ ಪೊಲೀಸರು ನಡೆಸುವ ತನಿಖೆಯಲ್ಲಿ ನನಗೆ ವಿಶ್ವಾಸವಿಲ್ಲ. ಪೊಲೀಸರು ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎಂದು ಮುಲ್ಕಿ– ಮೂಡುಬಿದಿರೆ ಶಾಸಕ ಉಮಾನಾಥ ಕೋಟ್ಯಾನ್ ಆರೋಪಿಸಿದ್ದಾರೆ. ಕೊಲೆ ವ್ಯವಸ್ಥಿತ ರೀತಿಯಲ್ಲಿ ನಡೆದಿದೆ. ಒಂದು ರೀತಿಯಲ್ಲಿ ಕೊಲೆಗಡುಕರು ಮತ್ತು ಪೊಲೀಸರ ನಡುವೆ ಒಡಂಬಡಿಕೆಯಾಗಿದೆ. ವಾಹನದಲ್ಲಿ ಆಯುಧ ಇಡಬಾರದು ಎಂದು ಸುಹಾಸ್ ಶೆಟ್ಟಿ ಆತ್ಮರಕ್ಷಣೆಗೆ ಕಾರಿನಲ್ಲಿಟ್ಟಿದ್ದ ಆಯುಧವನ್ನು ಎರಡು ದಿವಸಗಳ ಮೊದಲು ಪೊಲೀಸರು ತೆರವುಗೊಳಿಸಿದ್ದರು. ಕೊಲೆಯಾದ ದಿನ ಬೆಳಗ್ಗೆ ಸುಹಾಸ್ ಶೆಟ್ಟಿ ತನ್ನ ಕಾರನ್ನು ಸರ್ವಿಸ್‌ಗೆ ಇಡುವಾಗ ಇಬ್ಬರು ಆರೋಪಿಗಳು ಬಂದು ಆತನ ಹಿಂಬಾಲಿಸಿಕೊಂಡು ಬಂದಿದ್ದಾರೆ ಎಂದು ಮಾಹಿತಿ ನೀಡಿದರು. ಪೊಲೀಸ್ ಇಲಾಖೆ ಕೊಲೆಯಲ್ಲಿ ಕೈಜೋಡಿ ಸಿದೆ. ದ.ಕ. ಜಿಲ್ಲೆಗೆ ಒಬ್ಬರು ಪೊಲೀಸ್ ಆಯುಕ್ತರು ಬಂದಿದ್ದಾರೆ. ಇಂತಹ ಆಯುಕ್ತರನ್ನು ನಾನು ನನ್ನ ಸರ್ವಿಸ್‌ನಲ್ಲಿ ನೋಡಿಲ್ಲ. ಇಸ್ಪೇಟ್, ಜುಗಾರಿ, ಅಕ್ರಮ ಮರಳುಗಾರಿಕೆ. ಹೀಗೆ ಪ್ರತಿಯೊಂದು ವಿಚಾರದಲ್ಲೂ ಡೀಲಿಂಗ್ ನಡೆಯುತ್ತಿದೆ ಎಂದು ಆರೋಪಿಸಿದರು.

## ಪಠ್ಯಪುಸ್ತಕ, ಪುಸ್ತಕಗಳ ರವಾನೆಗೆ 'ಜ್ಞಾನ ಅಂಚೆ'




ಉಡುಪಿ: ಪಠ್ಯಪುಸ್ತಕ, ಗೈಡ್ ಮತ್ತು ಸಾಹಿತ್ಯ ಕೃತಿಗಳ ರವಾನೆಗಾಗಿಯೇ ಮೀಸಲಿರುವ ಭಾರತೀಯ ಅಂಚೆ ಇಲಾಖೆಯ 'ಜ್ಞಾನ ಅಂಚೆ' ಸೇವೆ ಇದೇ ಮೇ 1ರಿಂದ ಆರಂಭವಾಗಿದೆ. ಈ ಮೊದಲು ಪಠ್ಯ ಪುಸ್ತಕ, ಗೈಡ್ ಮತ್ತು ಸಾಹಿತ್ಯ ಕೃತಿಗಳನ್ನು ಭಾರತೀಯ ಅಂಚೆಯ ಬುಕ್ ಪ್ಯಾಕೆಟ್ ಮತ್ತು ಬುಕ್ ಪೋಸ್ಟ್‌ಗಳ ಮೂಲಕ ಕಳುಹಿಸಬೇಕಿತ್ತು. ಭಾರತೀಯ ಅಂಚೆ ಕಾಯ್ದೆಗೆ 2023ರಲ್ಲಿ ತಿದ್ದುಪಡಿ ತರುವ ಮೂಲಕ ಬುಕ್ ಪ್ಯಾಕೆಟ್ ಸೇವೆಯನ್ನು 2024ರ ಜೂನ್‌ನಲ್ಲಿ ರದ್ದುಪಡಿಸಲಾಗಿತ್ತು.

## ನವೋದಯ ರಜತ ಸಂಭ್ರಮಕ್ಕೆ ರಾಜ್ಯಪಾಲರು



ಮಂಗಳೂರು: ಮೇ 10ರಂದು ನಡೆಯಲಿರುವ ನವೋದಯ ಸ್ವಸಹಾಯ ಗುಂಪುಗಳ ಸಮಾವೇಶ "ರಜತ ಸಂಭ್ರಮ" ನೆನಪಿಗಾಗಿ ವಿಶಿಷ್ಟ ರೀತಿಯ ಲಾಂಛನವನ್ನು ಕರ್ನಾಟಕದ ಮಾನ್ಯ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಬಿಡುಗಡೆ ಗೊಳಿಸಲಿದ್ದಾರೆ ಎಂದು ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ಇದರ ಸಂಸ್ಥಾಪಕರಾದ ಡಾ. ಎಂ.ಎನ್. ರಾಜೇಂದ್ರ ಕುಮಾರ್ ತಿಳಿಸಿದ್ದಾರೆ. ಅವರು ಎಸ್ ಸಿ ಡಿಸಿ ಸಭಾಂಗಣದಲ್ಲಿ ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಈ ಸಮಾವೇಶ ದೇಶಕ್ಕೆ ಮಾದರಿಯಾಗುವ ಸಮಾವೇಶ ಆಗಲಿದ್ದು, ಈ ಅರ್ಥಪೂರ್ಣ ರಜತ ಸಂಭ್ರಮವನ್ನು ಕರ್ನಾಟಕ ಸರಕಾರದ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ನವೋದಯ ರಜತ ಸಂಭ್ರಮದ ನವೋದಯ ಸ್ವ–ಸಹಾಯ ಗುಂಪುಗಳ ಸದಸ್ಯರುಗಳಿಗೆ ಸವಲತ್ತು ವಿತರಣೆಯನ್ನು ಮಹಾರಾಷ್ಟ ಸರಕಾರದ ಮಾನ್ಯ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಇವರು ನೆರವೇರಿಸಲಿದ್ದು, ರಜತ ಸಂಭ್ರಮದ 'ಸಂತೃಪ್ತಿ' ಸ್ಮರಣ ಸಂಚಿಕೆಯ ಬಿಡುಗಡೆಯನ್ನು ಕರ್ನಾಟಕ ಸರಕಾರದ ಮಾನ್ಯ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇವರು ನೆರವೇರಿಸಲಿದ್ದಾರೆ ಎಂದು ಡಾ। ಎಂ.ಎನ್. ರಾಜೇಂದ್ರ ಕುಮಾರ್ ತಿಳಿಸಿದ್ದಾರೆ.

## ಖಾದರ್ ಸ್ಪೀಕರ್ ಸ್ಥಾನಕ್ಕೆ ರಾಜೀನಾಮೆ ನೀಡಲು ಬಿಜೆಪಿ ಅಗ್ರಹ




ಮಂಗಳೂರು: ಸುಹಾಸ್ ಶೆಟ್ಟಿ ಕೊಲೆ ಪ್ರಕರಣದಲ್ಲಿ ಬಂಧಿತ ಆರೋಪಿಯೊಬ್ಬನ ಕುಟುಂಬದ ಪರ ತನಿಖೆಗೆ ಮೊದಲೇ ಕ್ಲೀನ್ ಚಿಟ್ ಹೇಳಿಕೆ ನೀಡಿರುವ ಸ್ಪೀಕರ್ ಯು.ಟಿ. ಖಾದರ್ ಸ್ಪೀಕರ್ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ದ.ಕ. ಜಿಲ್ಲಾ ಬಿಜೆಪಿ ಅಧ್ಯಕ್ಷ ಸತೀಶ್ ಕುಂಪಲ ಆಗ್ರಹಿಸಿದ್ದಾರೆ. ಬಿಜೆಪಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಹಾಸ್ ಹತ್ಯೆ ಪ್ರಕರಣದ ತನಿಖೆಯಲ್ಲಿ ಸ್ಪೀಕರ್ ಯು.ಟಿ.ಖಾದರ್ ಅವರಿಗೆ ಯಾಕೆ ಅಷ್ಟೊಂದು ಕಾಳಜಿ? ತನಿಖೆ ವಿಚಾರದಲ್ಲಿ ಹೇಳಿಕೆ ಕೊಡಲು ಅವರು ಯಾರು ? ಉಸ್ತುವಾರಿ ಸಚಿವರೇ ? ಎಂದು ಪ್ರಶ್ನಿಸಿದರು. ಖಾದರ್ ಅವರದ್ದು ಒನ್ ಸೈಡ್ ವರ್ತನೆ. ಅವರು ಸ್ಪೀಕರ್ ಆಗಿರುವ ತನಕ ಸುಹಾಸ್ ಶೆಟ್ಟಿ ಪ್ರಕರಣದಲ್ಲಿ ನ್ಯಾಯ ಸಿಗುವ ನಂಬಿಕೆ ಇಲ್ಲ. ಆದ್ದರಿಂದ ಅವರು ಸ್ಪೀಕರ್ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇಲ್ಲವಾದರೆ ರಾಜ್ಯಪಾಲರೇ ಮಧ್ಯೆ ಪ್ರವೇಶಿಸಿ ಅವರ ರಾಜೀನಾಮೆ ಪಡೆಯಲಿ ಎಂದು ಆಗ್ರಹಿಸಿದರು. ಸ್ಪೀಕರ್ ಆದವರು ಅವರ ಜವಾಬ್ದಾರಿಯನ್ನು ನಿಭಾಯಿಸಬೇಕು. ಅದು ಬಿಟ್ಟು ಇಂತಹ ಹೇಳಿಕೆ ಕೊಟ್ಟದ್ದು ಯಾಕೆ? ಖಾದರ್ ಎರಡು ಬಾರಿ ಹೇಳಿಕೆ ಕೊಟ್ಟು ಯಾಕೆ ಸುಮ್ಮನಾಗಿದ್ದಾರೆ ಎಂದು ಪ್ರಶ್ನಿಸಿದರು.

## ಹತ್ಯೆಗೆ 50 ಲಕ್ಷ ಫಂಡಿಂಗ್: ವಿ.ಎಚ್.ಪಿ. ಆರೋಪ



ಮಂಗಳೂರು: ಸುಹಾಸ್ ಶೆಟ್ಟಿ ಹತ್ಯೆಗೆ 50 ಲಕ್ಷ ರೂಪಾಯಿಗೂ ಅಧಿಕ ಹಣ ಫಂಡಿಂಗ್ ಆಗಿದೆ. ಪಿಎಫ್‌ಐ ನಡೆಸುತ್ತಿರುವ ಟಾರ್ಗೆಟೆಡ್ ಕಿಲ್ಲಿಂಗ್ ಮಾದರಿಯಲ್ಲಿ ಈ ಹತ್ಯೆ ನಡೆದಿದೆ. ಈ ಹತ್ಯೆ ಹಿಂದೆ ಯಾರಿದ್ದಾರೆ ಎಂಬುದನ್ನು ಪತ್ತೆಹಚ್ಚಲು ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ಗೆ ವಹಿಸಬೇಕು ಎಂದು ಹಿಂದೂ ಜಾಗರಣ ವೇದಿಕೆ ಪ್ರಾಂತ ಪ್ರಮುಖ್ ಕೆ.ಟಿ. ಉಲ್ಲಾಸ್ ಆಗ್ರಹಿಸಿದ್ದಾರೆ. ನಗರದ ವಿಎಚ್‌ಪಿ ಕಛೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣದಲ್ಲಿ ನೈಜ ಅಪರಾದಿಗಳನ್ನು ಬಂಧಿಸಿದ್ದಾರೆಯೇ ಎಂಬ ಬಗ್ಗೆ ಸಂಶಯ ಇದೆ. ಫಾಝಿಲ್ ಹತ್ಯೆಗೆ ಪ್ರತೀಕಾರವಾಗಿ ಮಾತ್ರ ಸುಹಾಸ್ ಹತ್ಯೆ ನಡೆಸಿಲ್ಲ. ಫಾಝಿಲ್ ಸಹೋದರ ಮಾತ್ರ ಕೊಲೆಗೆ ಸುಪಾರಿ ನೀಡಿಲ್ಲ. ಕೆಲ ದುಷ್ಟಶಕ್ತಿಗಳು ಸುಹಾಸ್ ಕೊಲೆಗೆ 50 ಲಕ್ಷ ರೂ. ಸಂಗ್ರಹಿಸಿರುವ ಮಾಹಿತಿಯಿದೆ ಎಂದು ಹೇಳಿದರು. ಕುಡುಪುವಿನಲ್ಲಿ ಅಶ್ರಫ್ ಎಂಬಾತನ ಕೊಲೆ ನಡೆದ ಮೂರು ದಿನದಲ್ಲಿ ಪಿಎಫ್‌ಐ ಮಾದರಿಯಲ್ಲಿ ಈ ಕೊಲೆ ನಡೆಸಲಾಗಿದೆ. ಕೊಲೆ ನಡೆಸಿದ ಬಳಿಕ ಆರೋಪಿಗಳು ಸ್ಥಳದಿಂದ ತೆರಳಲು ಯಾವುದೇ ಆತುರ ಇರಲಿಲ್ಲ. ಸುಹಾಸ್ ಸಾವಿನ ಬಗ್ಗೆ ಖಾತ್ರಿಯಾದ ಬಳಿಕ ಆರೋಪಿಗಳು ಆರಾಮವಾಗಿ ಸ್ಥಳದಿಂದ ತೆರಳಿದ್ದಾರೆ. ಯಾರ ಸಹಕಾರದಿಂದ ಈ ಹತ್ಯೆ ನಡೆದಿದೆ. ಈ ಎಲ್ಲ ಹಿನ್ನೆಲೆಯಲ್ಲಿ ಪ್ರಕರಣವನ್ನು ಎನ್‌ಐಎ ತನಿಖೆ ನಡೆಸಬೇಕು ಎಂದು ಆಗ್ರಹಿದರು.

## ಫಾಜಿಲ್ ತಮ್ಮನಿಂದ ಹಣ ಸಹಾಯ–ಅಗರ್ವಾಲ್



ಮಂಗಳೂರು: ದಕ್ಷಣ ಕನ್ನಡ ಜಿಲ್ಲೆಯಲ್ಲಿ ತೀವ್ರ ಸಂಚಲನಕ್ಕೆ ಕಾರಣವಾಗಿದ್ದ, ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ಬಗ್ಗೆ ಮಂಗಳೂರು ಪೊಲೀಸ್ ಆಯುಕ್ತರು ಮಹತ್ವದ ಹೇಳಿಕೆ ನೀಡಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್, ಘಟನೆ ಸಂಬಂಧ ಎಂಟು ಮಂದಿಯನ್ನು ಬಂಧಿಸಲಾಗಿದ್ದು, ಈ ಪೈಕಿ ಇಬ್ಬರು ಹಿಂದುಗಳು ಇರುವುದು ದೃಢಪಟ್ಟಿದೆ. ಈ ಹಿಂದೆ ಕೊಲೆಯಾಗಿದ್ದ ಫಾಜಿಲ್ ತಮ್ಮ ಆದಿಲ್ ಸುಹಾಸ್ ಶೆಟ್ಟಿ ಕೊಲೆಗೆ 5 ಲಕ್ಷ ಹಣ ಮಾಡಿದ್ದಾನೆ. ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದಲ್ಲಿ 8 ಆರೋಪಿಗಳನ್ನು ಬಂಧಿಸಲಾಗಿದೆ. ಅಬ್ದುಲ್ ಸಫ್ವಾನ್ (29), ನಿಯಾಜ್ (28), ಕಲಂದರ್ ಶಾಫಿ (31), ಮೊಹಮ್ಮದ್ ಮುಝಮ್ಮಿಲ್ (32), ರಂಜಿತ್ (19), ನಾಗರಾಜ್ (20), ಮೊಹಮ್ಮದ್ ರಿಜ್ವಾನ್ (28) ಮತ್ತು ಆದಿಲ್ ಮೆಹರೂಫ್ (ಫಾಜಿಲ್ ತಮ್ಮ) ಬಂದಿತರು. ಸುಹಾಸ್ ಕೊಲೆ ಮಾಡಲು ಸಫ್ವಾನ್ ತಂಡಕ್ಕೆ ಆದಿಲ್ 5 ಲಕ್ಷ ರೂ. ನೀಡಿದ್ದ. ನಂತರ ನಿಯಾಜ್ ಸ್ನೇಹಿತರಾದ ನಾಗರಾಜ್ ಮತ್ತು ರಂಜನ್ ಸಂಪರ್ಕ ಮಾಡುತ್ತಾರೆ. ಈ ಇಬ್ಬರು ಸಫ್ವಾನ್ ಮನೆಯಲ್ಲಿ ಎರಡು ದಿನಗಳ ಕಾಲ ವಾಸವಿದ್ದು, ಮೇ 1ರಂದು ಸುಹಾಸ್ ಚಲನವಲನ ಗಮನಿಸಿ ಕೊಲೆ ಮಾಡಿದ್ದಾರೆ ಎಂದು ಅನುಪಮ್ ಅಗರ್ವಾಲ್ ತಿಳಿಸಿದರು.

## ಕರಾವಳಿ ಜಿಲ್ಲೆಗಳಿಗೆ ಕೋಮು ವಿರೋಧಿ ಕಾರ್ಯಪಡೆ – ಡಾ.ಜಿ ಪರಮೇಶ್ವರ್



ಮಂಗಳೂರು: ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೋಮು ಸಂಘರ್ಷವನ್ನು ತಪ್ಪಿಸಲು ಆಂಟಿ ಕಮ್ಯೂನಲ್ ಟಾಸ್ಕ್ ಫೋರ್ಸ್ ಅನ್ನು ರಚಿಸಲಾಗುವುದು. ಯಾರು ಕಮ್ಯೂನಲ್ ಚಟುವಟಿಕೆಗಳನ್ನು ಮಾಡುತ್ತಾರೋ, ಅವರಿಗೆ ಸಪೋರ್ಟ್ ಮಾಡುತ್ತಾರೋ ಹಾಗೂ ಪ್ರಚೋದನಕಾರಿ ಭಾಷಣ ಮಾಡುತ್ತಾರೋ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಕ್ಕೆ ಈ ಪಡೆಯ ಅಧಿಕಾರಿಗಳಿಗೆ ಸಂಪೂರ್ಣ ಅಧಿಕಾರ ನಡಲಾಗುತ್ತಿದೆ ಎಂದು ಪರಮೇಶ್ವರ ತಿಳಿಸಿದರು. ಅವರು ನಗರದ ಪೋಲಿಸ್ ಆಯುಕ್ತರ ಕಛೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಯಾರು ಕೊಮುವಾದಕ್ಕೆ ಉತ್ತೇಜನ ಮಾಡುತ್ತಾರೋ, ಅವರಿಗೆ ಸಪೋರ್ಟ್ ಮಾಡುತ್ತಾರೋ ಅಂಥವರ ಮೇಲೆ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳುವುದಕ್ಕೆ ಈ ಪಡೆಗೆ ಅಧಿಕಾರವನ್ನು ಕೊಡಲಾಗುತ್ತದೆ. ಕರಾವಳಿ ಜಿಲ್ಲೆಗಳಲ್ಲಿ ಶಾಂತಿಯನ್ನು ಕಾಪಾಡುವ ಉದ್ದೇಶದಿಂದ ಈ ಕಾರ್ಯಪಡೆಯನ್ನು ರಚಿಸಲಾಗುವುದು. ರಾಜ್ಯದಲ್ಲಿ ಯಾರು ಪ್ರಚೋದನೆ ಭಾಷಣಗಳನ್ನು ಮಾಡುತ್ತಾರೋ ಅಂಥವರ ಮೇಲೆ ಕಾನೂನು ಪ್ರಕಾರ ನಿರ್ದಾಕ್ಷಣ್ಯ ಕ್ರಮ ತೆಗೆದುಕೊಳ್ಳುವುದಕ್ಕೆ ಸೂಚನೆ ನೀಡಲಾಗಿದೆ ಎಂದರು. ಒಂದು ಕಾಲದಲ್ಲಿ ಕರಾವಳಿ ಹಾಗೂ ದಕ್ಷಣ ಕನ್ನಡ ಜಿಲ್ಲೆಗೆ ಶಾಂತಿ ನೆಲೆಸಿದ ಸ್ಥಳ ಎಂದು ಇಲ್ಲಿಗೆ ಹುಡುಕಿಕೊಂಡು ಬರುತ್ತಿದ್ದರು. ಅದೇ ರೀತಿ ಇನ್ನು ಮುಂದಿನ ದಿನಗಳಲ್ಲಿಯೂ ದಕ್ಷಿಣ ಕನ್ನಡವನ್ನು ಶಾಂತಿಯುತ ಜಿಲ್ಲೆಯನ್ನಾಗಿ ಕಾಪಾಡುವುದಕ್ಕೆ ಆದ್ಯತೆ ನೀಡಲಾಗುತ್ತದೆ ಎಂದು ತಿಳಿಸಿದರು.




## ಆರ್‌ಪಿ ಮೋಷನ್ ಪೋಸ್ಟರ್, ಟೀಸರ್ ಬಿಡುಗಡೆ..



ಹೊಸ ಪ್ರತಿಭೆಗಳ ತಂಡವೊಂದು ಆರ್‌ಪಿ ಸಿನಿಮಾವನ್ನು ಸಿದ್ಧಪಡಿಸುತ್ತಿದ್ದಾರೆ. ಬ್ಲಾಕ್ ಅಂಡ್ ವೈಟ್ ಎಂಬ ಅಡಿ ಬರಹವಿದೆ. ಪ್ರಚಾರದ ಎರಡನೇ ಹಂತವಾಗಿ ಮೋಷನ್ ಪೋಸ್ಟರ್ ಮತ್ತು 4 ನಿಮಿಷದ ಪಾತ್ರಗಳ ಪರಿಚಯದ ಟೀಸರ್ ಬಿಡುಗಡೆ ಕಾರ್ಯಕ್ರಮ ಎಂಎಂಬಿ ಲೆಗಸಿದಲ್ಲಿ ಅದ್ದೂರಿಯಾಗಿ ನಡೆಯಿತು. ಹಿರಿಯ ನಟ ಕರಿಸುಬ್ಬು ಹಾಗೂ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ತಂಡಕ್ಕೆ ಶುಭ ಹಾರೈಸಿದರು. ಹಲವಾರು ಸ್ನೇಹಿತರು ಸೇರಿ ಡಿಎಲ್ ಗ್ರೂಪ್ ಫಿಲಿಂಸ್, ಕಬ್ಬಾಳಮ್ಮ ಕ್ರಿಯೇಶನ್ ಅಡಿಯಲ್ಲಿ ನಿರ್ಮಿಸುತ್ತಿರುವ ಈ ಚಿತ್ರಕ್ಕೆ ಯುವರಾಜ್.ಎಸ್ (ಬ್ಯಾಲದಕೆರೆ)ಕಥೆ, ಚಿತ್ರಕಥೆ, ಸಾಹಿತ್ಯ, ಸಂಭಾಷಣೆ, ನಿರ್ದೇಶನ ಮತ್ತು ಬಂಡವಾಳ ಹೂಡಿದ್ದಲ್ಲದೆ ಖತರ್‌ನಾಕ್ ಖಳನ ಪಾತ್ರಕ್ಕೆ ಬಣ್ಣ ಹಚ್ಚುತ್ತಿದ್ದಾರೆ.

## "ಗಂಟ್ ಕಲ್ವೆರ್" ಮೇ 23ರಂದು ಬಿಡುಗಡೆ..



ಬಹು ನಿರೀಕ್ಷೆಯ "ಗಂಟ್ ಕಲ್ವೆರ್" ತುಳು ಚಿತ್ರ ಇದೇ ಬರುವ ಮೇ 23ರಂದು ರಾಜ್ಯಾದ್ಯಾಂತ ಬಿಡುಗಡೆ ಆಗಲಿದೆ. ಚಿತ್ರ ಈಗಾಗಲೇ ಸೆನ್ಸಾರ್ ಆಗಿದೆ ಎಂದು ಸಿನಿಮಾದ ನಿರ್ದೇಶಕ ಸುಧಾಕರ ಬನ್ನಂಜೆ ಪ್ರೆಸ್ ಕ್ಲಬ್‌ನಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ತುಳು ನಾಟಕ ಧಾರಾವಾಹಿ ಸಿನಿಮಾಗಳಲ್ಲಿ ತುಳುನಾಡಿನ ಕೀರ್ತಿಯನ್ನು ಎತ್ತಿಹಿಡಿದ ಸುಧಾಕರ್ ಬನ್ನಂಜೆಯವರು ಕತೆ ಚಿತ್ರಕತೆ ಸಂಭಾಷಣೆ ಹಾಡು ಬರೆದು ನಿರ್ದೇಶನ ಮಾಡಿದ್ದಾರೆ. ತುಳು ಮೂಲದ ಕನ್ನಡ ಚಿತ್ರರಂಗದ ಪ್ರಶಸ್ತಿ ವಿಜೇತ ಸಂಗೀತ ನಿರ್ದೇಶಕ ವಿ ಮನೋಹರ್ ಇದಕ್ಕೆ ಸಂಗೀತ ನೀಡಿದ್ದಾರೆ. ತಮ್ಮ ಲಕ್ಷ್ಮಣ ಕಲಾ ನಿರ್ದೇಶನ, ಕೆ. ಗಿರೀಶ್ ಕುಮಾರ್ ಸಂಕಲನ, ಶಂಕರ್ ರವಿಕಿಶೋರ್ ಛಾಯಾಗ್ರಹಣ. ಪ್ರಶಾಂತ್ ಎಳ್ಳಂಪಳ್ಳಿ ಮತ್ತು ರಾಮದಾಸ್ ಸಸಿಹಿತ್ಲು ಸಹ ನಿರ್ದೇಶಕರಾಗಿ ದುಡಿದಿದ್ದಾರೆ.

## ಬಾಲಿವುಡ್‌ಗೆ ಹೊರಟ ಪ್ರಿಯಾಂಕಾ ಉಪೇಂದ್ರ..

ಕನ್ನಡತಿ ಕರೆನ್ ಕ್ಷಿತಿ ಸುವರ್ಣ ಇದೀಗ ಸೆಪ್ಟೆಂಬರ್ 21 ಎಂಬ ಹೆಸರಿನ ಬಾಲಿವುಡ್ ಸಿನಿಮಾ ನಿರ್ದೇಶಿಸುತ್ತಿದ್ದಾರೆ. ಬೆಂಗಳೂರು ಮೂಲದ ಆಲ್ಝೈಮರ್ ರೋಗಿ ಮತ್ತು ಆತನ ಆರೈಕೆ ಮಾಡುವ ನರ್ಸ್ ಒಬ್ಬಳ ನಡುವಿನ ಕಥೆಯನ್ನು ಈ ಸಿನಿಮಾ ಹೊಂದಿದೆ. ಈ ಸಿನಿಮಾದಲ್ಲಿ ಕನ್ನಡದ ನಟಿ ಪ್ರಿಯಾಂಕಾ ಉಪೇಂದ್ರ, ಕೇರ್ ಟೇಕರ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇನ್ನುಳಿದಂತೆ, ಬಾಲಿವುಡ್‌ನ ಪ್ರವೀಣ್ ಸಿಂಗ್ ಸಿಸೋಡಿಯಾ, ಜರೀನಾ ವಹಾಬ್ ಮತ್ತು ಅಮಿತ್ ಬೆಹ್ಲ್ ಸಹ ಮುಖ್ಯ ಭೂಮಿಕೆಯಲ್ಲಿ ಇರಲಿದ್ದಾರೆ. ಈ ಚಿತ್ರದಲ್ಲಿ ನರ್ಸ್ ಭಾವನಾತ್ಮಕ ಬೆಂಬಲದ ಜತೆಗೆ ಆರೈಕೆಯನ್ನು ಮಾಡುತ್ತಾರೆ. ರೋಗಿಯ ಆರೈಕೆ ಮಾಡುವ ಮಹಿಳೆಯ ಹೋರಾಟಗಳು, ಕಾಯಿಲೆಯನ್ನು ನಿಭಾಯಿಸುವಾಗ ಎದುರಾಗುವ ಸವಾಲುಗಳು, ಎಲ್ಲವನ್ನೂ ತ್ಯಜಿಸಿ ರೋಗಿಯ ಗುಣವಾಗುವಿಕೆಗೆ ಕೆಲಸ ಮಾಡುವವಳಾಗಿ ಪ್ರಿಯಾಂಕಾ ಉಪೇಂದ್ರ ಕಾಣಿಸಿಕೊಂಡಿದ್ದಾರೆ.



## 'ಮರಳಿ ಮನಸಾಗಿದೆ' ಜುಲೈಯಲ್ಲಿ ತೆರೆಗೆ ಬರಲಿದೆ..

ನಾಗರಾಜ್ ಶಂಕರ್ ನಿರ್ದೇಶನದ, ಮುದೇಗೌಡ್ರು ನವೀನ್ ಕುಮಾರ್ ಆರ್.ಓ ಹಾಗೂ ತೆಲಗಿ ಮಲ್ಲಿಕಾರ್ಜುನಪ್ಪನವರ ನಿರ್ಮಾಣದ 'ಮರಳಿ ಮನಸಾಗಿದೆ' ಕನ್ನಡ ಚಿತ್ರದ ಬಹುಪಾಲು ಚಿತ್ರೀಕರಣ ಸುರತ್ಕಲ್, ಉಡುಪಿ, ಬೈಂದೂರು ಸಹಿತ ಕರ್ನಾಟಕ ಕರಾವಳಿಯ ವಿವಿಧ ಕಡೆಗಳಲ್ಲಿ ನಡೆದಿದೆ. ಚಿತ್ರದ ಕತೆಗೆ ಕರಾವಳಿಯ ಲಿಂಕ್ ಇದೆ ಚಿತ್ರದಲ್ಲಿ ಐದು ಹಾಡುಗಳಿದ್ದು, ಈಗಾಗಲೇ ಬಿಡುಗಡೆಗೊಂಡಿರುವ ಎರಡು ಹಾಡುಗಳಿಗೆ ಅತ್ಯುತ್ತಮ ಸ್ಪಂದನೆ ದೊರೆತ್ತಿದ್ದು, ಮೂರನೇ ಹಾಡು 'ಏನಿದು ರೋಮಾಂಚನ' ಉಡುಪಿಯಲ್ಲಿ ಬಿಡುಗಡೆಗೊಂಡಿದೆ ಎಂದು ನಿರ್ದೇಶಕ ನಾಗರಾಜ್ ಶಂಕರ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ. ಚಿತ್ರದ ನಾಯಕ ದಕ್ಷಿಣ ಕನ್ನಡ ಪುತ್ತೂರು ಮೂಲದ ಅರ್ಜುನ್ ವೇದಾಂತ್ ಈಗಾಗಲೇ 10 ಚಿತ್ರಗಳಲ್ಲಿ ಅಭಿನಯಿಸಿದ್ದಾರೆ. ನಾಯಕಿ ಸ್ಮತಿ ವೆಂಕಟೇಶ್ ಅವರಿಗೆ ಇದು ಮೊದಲನೆಯ ಚಿತ್ರ ಎಂದು ಅವರು ತಿಳಿಸಿದರು.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212